ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಜೂನ್ 26, 2020**

# ಪತ್ರಿಕಾ ಆಮಂತ್ರಣ

**1. ಕೆಂಪೇಗೌಡರ 108 ಅಡಿ ಎತ್ತರದ ಪ್ರತಿಮೆಯ ಶಿಲಾನ್ಯಾಸ ಹಾಗೂ ಸೆಂಟ್ರಲ್ ಪಾರ್ಕ್ ಕಾಮಗಾರಿಯ ಭೂಮಿ ಪೂಜೆ ಕಾರ್ಯಕ್ರಮ.**

**ಭೂಮಿ ಪೂಜೆ ಹಾಗೂ ಮಾದರಿ ಪ್ರತಿಮೆ ಅನಾವರಣ :**

**ಶ್ರೀ ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.**

**ದಿನಾಂಕ : 27–6–2020 ಶನಿವಾರ, ಸಮಯ : ಬೆಳಿಗ್ಗೆ 10.30 ಗಂಟೆಗೆ**

**ಸ್ಥಳ : ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ, ಬೆಂಗಳೂರು.**

**ವಿಶೇಷ ಸೂಚನೆ : ಈ ಕಾರ್ಯಕ್ರಮಕ್ಕೆ ವಾಹನದ ವ್ಯವಸ್ಥೆ ಮಾಡಲಾಗಿದೆ. ವಾಹನವು ಕೇಂದ್ರ ಕಚೇರಿಯ ಆವರಣದಿಂದ ಅಂದು ಬೆಳಿಗ್ಗೆ 8.45 ಗಂಟೆಗೆ ಹೊರಡಲಿದೆ.**

**2. ವಸತಿ ಯೋಜನೆಯ ಸ್ಥಳ ವೀಕ್ಷಣೆ, ಅಧಿಕಾರಿಗಳೊಂದಿಗೆ ಸಮಾಲೋಚನೆ ಕಾರ್ಯಕ್ರಮ ಹಾಗೂ ಶ್ರೀ ಸ್ವಾಮಿ ವಿವೇಕಾನಂದ ಯೋಗ ಅನುಸಂದಾನ ಸಂಸ್ಥಾನಕ್ಕೆ ಭೇಟಿ**

**ಶ್ರೀ ವಿ. ಸೋಮಣ್ಣ, ವಸತಿ ಸಚಿವರು**

**ದಿನಾಂಕ : 27–06–2020, ಶನಿವಾರ, ಸಮಯ : ಬೆಳಿಗ್ಗೆ 11–00 ಗಂಟೆಗೆ**

**ಸ್ಥಳ : ಆನೇಕಲ್ ತಾಲ್ಲೂಕು, ಜಿಗಣಿ (ಸೂರ್ಯನಗರ 4ನೇ ಹಂತ), ಬೆಂಗಳೂರು.**

**3. ಕೋವಿಡ್-19 ಉದ್ಯೋಗ್ ಸಹಾಯವಾಣಿ ಪ್ರಾರಂಭ**

**ಶ್ರೀ ಜಗದೀಶ್ ಎಸ್.ಶೆಟ್ಟರ್, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು**

**ದಿನಾಂಕ : 27-6-2020 ಶನಿವಾರ ಸಮಯ : ಬೆಳಿಗ್ಗೆ 11.00**

**ಸ್ಥಳ : ಕಾಸಿಯಾ ಸಭಾಂಗಣ, ವಿಜಯನಗರ, ಬೆಂಗಳೂರು**

# ಪತ್ರಿಕಾ ಪ್ರಕಟಣೆ

**ನಿಮ್ಹಾನ್ಸ್ ಉತ್ತರ ಆವರಣದ ಓ.ಪಿ.ಡಿ. ಕಟ್ಟಡ ಸಂಕೀರ್ಣದ ಶಂಕುಸ್ಥಾಪನೆ ಹಾಗೂ ಕರ್ನಾಟಕ ಸಕಾರದಿಂದ "ಇ–ಮನಸ್" ತಂತ್ರಾಂಶ ಲೋಕಾರ್ಪಣೆ**

**– ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ.**

ಬೆಂಗಳೂರು, ಜೂನ್ 26 (ಕರ್ನಾಟಕ ವಾರ್ತೆ)

ಮಾನಸಿಕ ಕಾಯಿಲೆವುಳ್ಳ ಯಾವುದೇ ವ್ಯಕ್ತಿಗೆ ಸುಲಭವಾಗಿ ಚಿಕಿತ್ಸೆ ದೊರೆಯಲು ಪ್ರತಿ ಮಂಗಳವಾರ "ಮನೋ ಚೈತನ್ಯ"ದಂತಹ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಿಳಿಸಿದರು.

ಇಂದು ಅವರು ವಿಧಾನಸೌದದ ಸಮಿತಿ ಕೊಠಡಿಯಲ್ಲಿ ಆನ್‌ಲೈನ್ ವಿಡಿಯೋ ಕಾನ್ಫರೆನ್ಸ್ ಮುಖಾಂತರ ನಿಮ್ಹಾನ್ಸ್ ಉತ್ತರ ಆವರಣದ ಓ.ಪಿ.ಡಿ. ಕಟ್ಟಡ ಸಂಕೀರ್ಣದ ಶಂಕುಸ್ಥಾಪನೆ ಹಾಗೂ ಕರ್ನಾಟಕ ಸರ್ಕಾರದಿಂದ "ಇ–ಮನಸ್" ತಂತ್ರಾಂಶ ಲೋಕಾರ್ಪಣೆ ಮಾತನಾಡಿದರು.

ನಿಮ್ಹಾನ್ಸ್ ಸಂಸ್ಥೆಯ ಉತ್ತರ ಆವರಣದ ಭೂಮಿ ಪೂಜೆ ಹಾಗೂ ಓ.ಪಿ.ಡಿ ಸಂಕೀರ್ಣದ ಶಂಕುಸ್ಥಾಪನೆಯನ್ನು ಸಂತೋಷದಿಂದ ನೇರವೇರಿಸಿದ್ದೇನೆ. ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ (ನಿಮ್ಹಾನ್ಸ್) ನಮ್ಮ ನಾಡಿನ ಅತ್ಯಂತ ಹೆಮ್ಮೆಯ ಸಂಸ್ಥೆ. ಸುಮಾರು 40 ಎಕರೆ ಜಾಗದಲ್ಲಿ ಮೊದಲ ಹಂತವಾಗಿ ಮಾನಸಿಕ ಆರೋಗ್ಯ – ಓ.ಪಿ.ಡಿ ಪ್ರಾರಂಭವಾಗುತ್ತಿರುವುದು ಶ್ಲಾಘನೀಯ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ನಿಮ್ಹಾನ್ಸ್ ಸಂಸ್ಥೆಗೆ ಸರ್ಕಾರದ ವತಿಯಿಂದ ಎಲ್ಲಾ ಸಹಕಾರವನ್ನು ನೀಡಲಾಗುವುದು. ಕೊರೋನ ಬಂದಾಗಿನಿಂದ, ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯದ ಕಾಳಜಿ ಹೆಚ್ಚಾಗುತ್ತಿದೆ. ಮಾನಸಿಕ ಆರೋಗ್ಯಕ್ಕಾಗಿಯೇ "ಇ–ಮನಸ್" ಎಂಬ ತಂತ್ರಾಂಶ ರೂಪಿಸಿರುವುದು ಶ್ಲಾಘನೀಯ. ಈ ತಂತ್ರಾಂಶದಿಂದ ಮಾನಸಿಕ ಖಾಯಿಲೆಯುಳ್ಳ ವ್ಯಕ್ತಿ ಯಾವುದೇ ಅಡಚಣೆಯಿಲ್ಲದೆ ರಾಜ್ಯದ ಯಾವುದೇ ಆರೋಗ್ಯ ಸಂಸ್ಥೆಯಲ್ಲಿ ಔಷದೋಪಚಾರ ಪಡೆಯಬಹುದಾಗಿದೆ.

"ಇ–ಮನಸ್" ಆನ್‌ಲೈನ್ ಮೂಲಕ ಮಾನಸಿಕ ಆರೋಗ್ಯ ಕ್ಷೇತ್ರದ ಎಲ್ಲಾ ಪಾಲುದಾರರನ್ನು ಒಟ್ಟಿಗೆ ತರುತ್ತದೆ. ಇದಲ್ಲದೆ ಮಾನಸಿಕ ರೋಗಿಗಳ ಹಾಗೂ ಮಾನಸಿಕ ಆರೋಗ್ಯ ಆರೈಕೆ ಒದಗಿಸುವ ಎಲ್ಲಾ ಸೌಲಭ್ಯಗಳು ಮತ್ತು

ವೃತ್ತಿಪರರ ರಾಜ್ಯವ್ಯಾಪಿ ಆನ್‌ಲೈನ್ ನೋಂದಣಿಯಾಗಲಿದೆ. ಈ ತಂತ್ರಾಂಶವನ್ನು ರೂಪಿಸಿ ಐ.ಐ.ಟಿ ಬೆಂಗಳೂರು, ನಿಮ್ಹಾನ್ಸ್ ಹಾಗೂ ಎಲ್ಲರಿಗೂ ಧನ್ಯವಾದಗಳನ್ನು ತಿಳಿಸಿದರು.

2019–20ರಲ್ಲಿ ಸುಮಾರು 10 ಲಕ್ಷಕ್ಕೂ ಹೆಚ್ಚು ಜನರು "ಮನೋ ಚೈತನ್ಯ" ಕಾರ್ಯಕ್ರಮದ ಮೂಲಕ ಚಿಕಿತ್ಸೆ ಪಡೆದಿರುವುದು ಅದರ ಯಶಸ್ಸಿಗೆ ಸಾಕ್ಷಿಯಾಗಿದೆ. ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಯೋಗ, ಪ್ರಾಣಾಯಾಮ ನಮ್ಮೆಲ್ಲರ ದಿನನಿತ್ಯದ ಭಾಗವಾಗಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಕೋವಿಡ್ – 19 ಸೋಂಕು ವ್ಯಾಪಕವಾಗುತ್ತಿರುವ ಈ ಸನ್ನಿವೇಶದಲ್ಲಿ ಜನರಲ್ಲಿ ಸ್ಥೈರ್ಯ ತುಂಬಿ ಮಾನಸಿಕವಾಗಿ ಕುಗ್ಗದಂತೆ ಮಾಡುವ ಅಗತ್ಯವಿದೆ. ಜನರ ಮಾನಸಿಕ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ನೀಡಬೇಕಾಗಿದೆ. ಈ ನಿಟ್ಟಿನಲ್ಲಿ ಇ–ಮನಸ್ ಪ್ರಮುಖ ಪಾತ್ರವಹಿಸುವುದು ಎಂಬ ವಿಶ್ವಾಸ ನನಗಿದೆ. ಸಂಸ್ಥೆಗೆ ಇನ್ನೂ ಹೆಚ್ಚಿನ ಸ್ಥಳಾವಕಾಶದ ಅವಶ್ಯಕತೆ ಇದೆ ಎಂಬ ನಿಮ್ಮ ಬೇಡಿಕೆ ಮನದಲ್ಲಿದೆ. ಇದನ್ನು ಪರಿಶೀಲಿಸಿ ಮುಂದಿನ ಕ್ರಮವನ್ನು ಕೈಗೊಳ್ಳಲಾಗುವುದು. ಮಾನಸಿಕ ಆರೋಗ್ಯ ಸೇವೆಗಳು ಜನರಿಗೆ ಸುಲಭವಾಗಿ ದಕ್ಕುವ ನಿಟ್ಟಿನಲ್ಲಿ ಇ–ಮನಸ್ ಉಪಯುಕ್ತವಾಗಲಿ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಛಾಯಾಚಿತ್ರ ಲಗತ್ತಿಸಿದೆ)

## ಮಾದಕ ವಸ್ತುಗಳ ಸೇವನೆ ತ್ಯಜಿಸಿ : ಪ್ರೊ.ಕೆ.ಆರ್. ವೇಣುಗೋಪಾಲ್

ಬೆಂಗಳೂರು, ಜೂನ್ 26 (ಕರ್ನಾಟಕ ವಾರ್ತೆ)

ಮಾದಕ ವಸ್ತುಗಳ ಸೇವನೆ ತ್ಯಜಿಸಿ, ಮಜ್ಜಿಗೆ, ಹಣ್ಣಿನರಸ, ಎಳನೀರು ಸೇವಿಸಿದರೆ, ದೇಶದ ಅಭಿವೃದ್ದಿಯ ಜೊತೆಗೆ, ಶರೀರದ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಕೆ.ಆರ್. ವೇಣುಗೋಪಾಲ್ ತಿಳಿಸಿದರು.

ಅವರು ಇಂದು ಬೆಂಗಳೂರು ವಿಶ್ವವಿದ್ಯಾಲಯ ರಾಷ್ಟ್ರೀಯ ಸೇವಾ ಯೋಜನೆ ಘಟಕ ಹಾಗೂ ರಾಜ್ಯ ಎನ್‌ಎಸ್‌ಎಸ್ ಕೋಶ ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ವಿರೋಧಿ ಅರಿವು ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ತಂಬಾಕು, ಧೂಮಪಾನ ಹಾಗೂ ಮಧ್ಯಪಾನ ರಹಿತ ಕ್ಯಾಂಪಸ್ ಮಾಡಿದ್ದೇವೆ ಎಂದರು.

ಡಾ ಸತೀಶ್ ಗೌಡ ಮಾತನಾಡಿ, ಜನರ ಮಾನಸಿಕ ಹಾಗೂ ದೈಹಿಕ ಆರೋಗ್ಯದ ದೃಷ್ಟಿಯಿಂದ ಪ್ರತಿ ವರ್ಷ ಜೂನ್ 26ರಂದು ಅಂತರಾಷ್ಟ್ರೀಯ ಮಾದಕ ಪದಾರ್ಥ ಸೇವನೆ ನಿಷೇಧ ದಿನವನ್ನು ಆಚರಿಸಲಾಗುತ್ತದೆ ಈ ಸಂದರ್ಭದಲ್ಲಿ ಮಾದಕ ಪದಾರ್ಥ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ.

ಮದ್ಯಪಾನ, ತಂಬಾಕು ,ಡ್ರಗ್ಸ್ ಧೂಮಪಾನ ಇವುಗಳನ್ನು ಅತಿಯಾಗಿ ಸೇವನೆ ಮಾಡುವುದರಿಂದ ಮಾನಸಿಕ ಸೀಮಿತ ಕಳೆದುಕೊಳ್ಳುವುದರ ಜೊತೆಗೆ ದೈಹಿಕವಾಗಿ ಕೂಡ ಹೃದಯ ಕಾಯಿಲೆ, ಕಿಡ್ನಿ ವೈಫಲ್ಯತೆ ,ಕ್ಯಾನ್ಸರ್‌ನಂತ ಕಾಯಿಲೆಗಳಿಗೆ ತುತ್ತಾಗಬೇಕಾಗುತ್ತದೆ ಅಲ್ಲದೆ ಆರ್ಥಿಕ ಸಾಮಾಜಿಕ ಜೀವನವನ್ನು ಹಾಳುಮಾಡುತ್ತವೆ. ಇಂದಿನ ಯುವಜನತೆ ಇದರ

ವಿರುದ್ಧ ಸಮರ ಸಾರಬೇಕಾಗಿದೆ. ಮನಸ್ಸನ್ನು ಉತ್ತಮ ಹವ್ಯಾಸಗಳತ್ತ ಕೇಂದ್ರೀಕರಿಸಿ, ಮಾದಕ ವ್ಯಸನಿಗಳಾಗದಂತೆ ಎಚ್ಚರಿಕೆ ವಹಿಸಿದರೆ ಈ ದೇಶದ ಸರ್ವತೋಮುಖ ಅಭಿವೃದ್ಧಿ ಸಾಧ್ಯ ಎಂದು ತಿಳಿಸಿದರು.

ಡಾ. ಗಣನಾಥ ಶೆಟ್ಟಿ ಅವರು ಮಾತನಾಡುತ್ತಾ ಇಂದಿನ ದಿನಗಳಲ್ಲಿ ಯುವಕರುಗಳು ಈ ಮಾದಕ ವಸ್ತುಗಳ ದಾಸರಾಗಿ ತಮ್ಮ ಶೈಕ್ಷಣಿಕ ಜೀವನ ಹಾಗೂ ಸಾಮಾಜಿಕ ಜೀವನವನ್ನು ಕಳೆದುಕೊಳ್ಳುತ್ತಿದ್ದಾರೆ. ಈ ಸಂಬಂಧವಾಗಿ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಬರುವಂತಹ ಎಲ್ಲಾ ಸ್ವಯಂಸೇವಕರುಗಳು ಹಾಗೂ ಕಾರ್ಯಕ್ರಮ ಅಧಿಕಾರಿಗಳು ಸಾಮೂಹಿಕವಾಗಿ ತಮ್ಮ ತಮ್ಮ ಕಾಲೇಜುಗಳಲ್ಲಿ ಹೆಚ್ಚೆಚ್ಚು ಮಟ್ಟದಲ್ಲಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮಾದಕ ವಸ್ತುಗಳನ್ನು ಬಿಡಿಸುವಂತಹ ಜಾಗೃತಿ ಕೆಲಸಗಳಾಗಬೇಕು.

ಸಾರ್ವಜನಿಕರು ಈ ಮಾದಕ ವಸ್ತುಗಳಿಗೆ ಬಲಿಯಾಗಿ ತಮ್ಮ ಸಾಮಾಜಿಕ,ಆರ್ಥಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ದುರ್ಬಲತೆಯನ್ನು ಅನುಭವಿಸುವಂತಹ ಪರಿಸ್ಥಿತಿ ಒದಗಿದೆ. ಈ ಹಿನ್ನೆಲೆಯಲ್ಲಿ ಇಂತಹ ಕಾರ್ಯಗಾರಗಳು ಅರಿವು ಮೂಡಿಸುವಲ್ಲಿ ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಡಾ:ಪೂರ್ಣಿಮಾ ಜೋಗಿ ಅವರು ಮಾತನಾಡಿ, ಈ ರೀತಿಯ ಕಾರ್ಯಾಗಾರದಿಂದ ಪ್ರತಿಯೊಬ್ಬರು ಸಾರ್ವಜನಿಕರಿಗೆ ಅರಿವು ಮೂಡಿಸುವುದಕ್ಕಿಂತ ಮುಂಚಿತವಾಗಿ, ನಿಮ್ಮ ನಿಮ್ಮ ಮನೆಗಳಲ್ಲಿ ಕುಟುಂಬದ ಸದಸ್ಯರುಗಳು ಈ ಮಾದಕ ವಸ್ತುಗಳನ್ನು ಬಳಸದಂತೆ ಎಚ್ಚರವಹಿಸಬೇಕು ಎಂದು ತಿಳಿಸಿದರು.

**ಕೋವಿಡ್ ನಿರ್ವಹಣೆಗೆ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬ ನೋಡಲ್ ಅಧಿಕಾರಿ ನೇಮಕಕ್ಕೆ ಕ್ರಮ**

ಬೆಂಗಳೂರು, ಜೂನ್ 26, (ಕರ್ನಾಟಕ ವಾರ್ತೆ)

ಕೋವಿಡ್ ನಿರ್ವಹಣೆಗೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬ ನೋಡಲ್ ಅಧಿಕಾರಿ ನೇಮಕ ಮಾಡಲಾಗುವುದೆಂದು ಮಾನ್ಯ ಮುಖ್ಯಮಂತ್ರಿಗಳು ಭರವಸೆ ನೀಡಿರುವುದಾಗಿ ಕಂದಾಯ ಸಚಿವ ಆರ್ ಅಶೋಕ್ ತಿಳಿಸಿದರು.

ಇಂದು ಮಾನ್ಯ ಮುಖ್ಯಮಂತ್ರಿ ಶ್ರೀ ಬಿ.ಎಸ್. ಯಡಿಯೂರಪ್ಪ ಅವರು ಇಂದು ಸಮ್ಮೇಳನ ಸಭಾಂಗಣದಲ್ಲಿ ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಕೋವಿಡ್-19 ಪ್ರಕರಣಗಳ ಹಿನ್ನೆಲೆಯಲ್ಲಿ ಬೆಂಗಳೂರು ನಗರದ ಎಲ್ಲಾ ಸಚಿವರು, ಶಾಸಕರಗಳು ಹಾಗೂ ಸಂಸತ್ ಸದಸ್ಯರುಗಳ ಸಭೆ ಕುರಿತು ಕಂದಾಯ ಸಚಿವರಾದ ಆರ್. ಅಶೋಕ್ ಅವರು ಮಾಧ್ಯಮದವರಿರೊಂದಿಗೆ ಮಾತನಾಡಿದರು.

ಬೆಂಗಳೂರಿನಲ್ಲಿ ನಿನ್ನೆ ಸಂಜೆಯ ವರೆಗೆ 1207 ಸಕ್ರಿಯ ಪ್ರಕರಣಗಳಿದ್ದು, ದಿನೇ ದಿನೇ ಪ್ರಕರಣಗಳು ಹೆಚ್ಚುತ್ತಿರುವುದನ್ನು ಗಮನಿಸಿ, ಅಗತ್ಯ ಸಿದ್ದತೆಗಳನ್ನು ಮಾಡಲಾಗಿದೆ. ಇತರ ಮಹಾನಗರಗಳಿಗೆ ಹೋಲಿಸಿದರೆ, ಬೆಂಗಳೂರಿನಲ್ಲಿ ಕಡಿಮೆ ಪ್ರಕರಣಗಳು ವರದಿಯಾಗಿವೆ ಎಂದು ಕಂದಾಯ ಸಚಿವರು ತಿಳಿಸಿದರು.

ಖಾಸಗಿ ಆಸ್ಪತ್ರೆಗಳನ್ನು ಗುರುತಿಸಿ, ಶೇಕಡ 50 ರಷ್ಟು ಹಾಸಿಗೆಗಳನ್ನು ಮೀಸಲಿರಿಸುವ ಬಗ್ಗೆ ಆದೇಶ ಹೊರಡಿಸಲಾಗಿದೆ. ಕೋವಿಡ್ ನಿರ್ವಹಣೆಯಲ್ಲಿ ಸರ್ಕಾರಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ

ಎಲ್ಲರೂ ಭರವಸೆ ನೀಡಿದ್ದಾರೆ. ಸಭೆಯಲ್ಲಿ ಎಲ್ಲ ಶಾಸಕರು, ಸಂಸದರು ನೀಡಿರುವ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಿ, ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದ್ದು ಅಗತ್ಯ ಕ್ರಮ ವಹಿಸುದಾಗಿ ಸಚಿವರು ತಿಳಿಸಿದರು.

ಪ್ರತಿ ಕ್ಷೇತ್ರದಲ್ಲಿ ಗಂಟಲ ದ್ರವ ಪರೀಕ್ಷೆಗೆ ಹೆಚ್ಚಿನ ವ್ಯವಸ್ಥೆ ಕಲ್ಪಿಸುವ ಕುರಿತು ಕ್ರಮ ವಹಿಸಲಾಗುವುದು. ಕೋವಿಡ್ ನಿಂದ ಮೃತಪಟ್ಟವರ ಮೃತ ದೇಹ ಸಾಗಿಸಲು ಪ್ರತ್ಯೇಕ ಅಂಬ್ಯುಲೆನ್ಸ್ ವ್ಯವಸ್ಥೆ ಮಾಡಲಾಗುವುದು. ರೋಗಲಕ್ಷಣ ಇಲ್ಲದೆ ಇರುವವರನ್ನು ಕ್ವಾರಂಟೈನ್ ಮಾಡಲು, ಬೆಂಗಳೂರು ನಗರದ ಹೊರವಲಯದಲ್ಲಿರುವ ಬೃಹತ್ ಕಲ್ಯಾಣ ಮಂಟಪಗಳನ್ನು ಸಹ ಬಳಸಿಕೊಳ್ಳಲು ಈಗಾಗಲೇ ಕ್ರಮ ವಹಿಸಲಾಗುತ್ತಿದ್ದು, ಹೋಟೆಲ್ ಗಳನ್ನು ಸಹ ಗುರುತಿಸಲಾಗಿದೆ ಎಂದು ತಿಳಿಸಿದರು.

ಖಾಸಗಿ ಆಸ್ಪತ್ರೆಗಳು ಕೋವಿಡ್ ಚಿಕಿತ್ಸೆ ನೀಡುವ ಕುರಿತು ಸೂಕ್ತ ಮೇಲ್ವಿಚಾರಣೆ ನಡೆಸಲು ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಆಯುರ್ವೇದ ಔಷಧಿಗಳನ್ನು ಮುನ್ನೆಚ್ಚರಿಕೆಯ ಕ್ರಮವಾಗಿ ವಿತರಿಸುವ ಬಗ್ಗೆ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಕೊರೋನಾ ವಾರಿಯರ್ ಗಳ ರಕ್ಷಣೆಗೆ ಸರ್ಕಾರ ಆದ್ಯತೆ ನೀಡಿದೆ. ಜನರಿಗೆ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಅರಿವು ಮೂಡಿಸಲು ಇನ್ನಷ್ಟು ಮಹತ್ವ ನೀಡಲು ಕ್ರಮ ಕೈಗೊಳ್ಳುತ್ತಿರುವುದಾಗಿ ತೀರ್ಮಾನಿಸಲಾಯಿತು ಎಂದು ತಿಳಿಸಿದರು.

ಛಾಯಾಚಿತ್ರ ಲಗತ್ತಿಸಿದೆ)

## ವಸತಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ: ಉಪ ಮುಖ್ಯ ಮಂತ್ರಿ ಗೋವಿಂದ ಎಂ ಕಾರಜೋಳ

ಬೆಂಗಳೂರು. ಜೂ. 26 (ಕರ್ನಾಟಕ ವಾರ್ತೆ)

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ವಸತಿ ಶಾಲೆಗಳ ಗುಣಾತ್ಮಕ ಶಿಕ್ಷಣ, ಉತ್ತಮ ನಿರ್ವಹಣೆ, ಕಟ್ಟಡಗಳ ನಿರ್ಮಾಣ ಸೇರಿದಂತೆ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಪೂರಕ ಇತರ ಕಾರ್ಯಚಟುವಟಿಕೆಗಳಿಗೆ ಪ್ರಸಕ್ತ ಸಾಲಿನಲ್ಲಿ 1365 ಕೋಟಿ ರೂ. ವೆಚ್ಚದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ ಅವರು ತಿಳಿಸಿದರು.

ವಿಕಾಸ ಸೌಧದಲ್ಲಿಂದು ನಡೆದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ 74 ನೇ ಆಡಳಿತ ಮಂಡಳಿ ಸಭೆಯ ಅಧ್ಯಕ್ಷತೆವಹಿಸಿದ್ದ ಅವರು, ಪ್ರತಿಭಾವಂತ ಸಾಧಕ ವಿದ್ಯಾರ್ಥಿಗಳ ಅನುಭವ ಸಾರವನ್ನು ಒಳಗೊಂಡ "ಸಮರ್ಥರ ಸಾಧನೆ", ಭೋದನಾ ಸಾಮಗ್ರಿ, ನೈಜ ಫಲಿತಾಂಶಗಳನ್ನು ಒಳಗೊಂಡ "ಸಾಧನ ದರ್ಪಣ" ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರವಾಸ ಕಥನ " ನಮ್ಮ ಪ್ರಯಾಣದ ಹೆಜ್ಜೆಗಳು" ಪುಸ್ತಕಗಳನ್ನು ಬಿಡುಗಡೆಗೊಳಿಸಿದರು.

ನಂತರ ಮಾತನಾಡಿದ ಅವರು, ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ, ಶೈಕ್ಷಣಿಕ ಅಭಿವೃದ್ಧಿಗಾಗಿ ಶಿಕ್ಷಣ ತಜ್ಞರಾದ ಡಾ. ಗುರುರಾಜ ಕರಜಗಿ ಇವರನ್ನು ಶೈಕ್ಷಣಿಕ ಸಲಹೆಗಾರರನ್ನಾಗಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ನಿವೃತ್ತ ನಿರ್ದೇಶಕರಾದ ಶ್ರೀ ಬೆಳ್ಳಿಶೆಟ್ಟಿ ಅವರನ್ನು ಸಮಾಲೋಚಕರನ್ನಾಗಿ ನೇಮಿಸಲಾಗುವುದು ಎಂದು ತಿಳಿಸಿದರು.

ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲೂಕಿನ ಮಳೂರು, ಬಾಗಲಕೋಟೆ ಜಿಲ್ಲೆಯ ಮುಧೋಳ್ ತಾಲೂಕಿನ ಬೆಳಗಲಿ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕುಂದಾಣದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಬಳ್ಳಾರಿ ಜಿಲ್ಲೆಯ ಹರಪ್ಪನಹಳ್ಳಿ ತಾಲೂಕಿನ ಮಾಚಿಹಳ್ಳಿಯಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ಕ್ರೀಡಾ ವಸತಿ ಶಾಲೆಯನ್ನಾಗಿ ಪರಿವರ್ತಿಸಲಾಗುವುದು.

ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಪಠ್ಯಪುಸ್ತಕಗಳನ್ನು ಒದಗಿಸಲು ಅನುದಾನ ಬಿಡುಗಡೆಗೆ ಅನುಮೋದನೆ ನೀಡಲಾಯಿತು. 12 ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ 6 ರಿಂದ 12 ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲಾಗುತ್ತಿದ್ದು, ಸಿಬಿಎಸ್‌ಸಿ ಪಠ್ಯಕ್ರಮವನ್ನು ಅಳವಡಿಸಿಕೊಳ್ಳಲು ಯೋಜಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಕುಮಾರ ನಾಯಕ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ಶ್ರೀ ಗಂಗಾರಾಂ ಬಡೇರಿಯಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಉಮಾಶಂಕರ್, ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯ ಸಲಹೆಗಾರರ ಶ್ರೀ ಇ. ವೆಂಕಟಯ್ಯ, ವಸತಿ ಸಂಘಗಳ ಸಂಸ್ಥೆಯ ಕಾರ್ಯನಿರ್ವಹಣಾಧಿಕಾರಿ ಶ್ರೀ ರಾಘವೇಂದ್ರ, ಡಿಸಿಎಂ ಅವರ ಆಪ್ತಕಾರ್ಯದರ್ಶಿ ಶ್ರೀ ವಿ.ಶ್ರೀನಿವಾಸ, ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮುಖ್ಯಸ್ಥರಾದ ಶ್ರೀ ಮಹೇಶ್ ಮತ್ತಿತರರು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಿದೆ)

## ವಿವಿಧ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಅಹ್ವಾನ

ಬೆಂಗಳೂರು. ಜೂ. 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕ ಸೇವ ಆಯೋಗವು ದಿನಾಂಕ: 24-06-2020ರಂದು ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ವಿವಿಧ ಗ್ರೂ "ಎ" ಮತ್ತು ಗ್ರೂಪ್ "ಬಿ" ತಾಂತ್ರಿಕ / ತಾಂತ್ರಿಕೇತರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿನ ಜಿಲ್ಲಾ ವ್ಯವಸ್ಥಾಪಕರು ಗ್ರೇಡ್ -ಎ / ಗ್ರೇಡ್ - ಬಿ / ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಹುದ್ದೆಗಳು 31, ಹೈ. ಕ ಹುದ್ದೆ 10 ಒಟ್ಟು 41 ಹುದ್ದೆಗಳು; ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ಸಹಾಯಕ ನಿರ್ದೇಶಕರು ಹುದ್ದೆ - ಹೈ. ಕ. ಹುದ್ದೆ 02 ಒಟ್ಟು 02 ಹುದ್ದೆಗಳು; ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದಲ್ಲಿ ಸಹಾಯಕ ನಿರ್ದೇಶಕರ ಹುದ್ದೆಗಳು 14, ಹೈ.ಕ ಹುದ್ದೆ - 03 ಒಟ್ಟು 17 ಹುದ್ದೆಗಳು; ಔಷಧ ನಿಯಂತ್ರಣ ಇಲಾಖೆಯ ಔಷಧ ವಿಜ್ಞಾನ ಮಹಾವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರು (ಫಾರ್ಮಾಸ್ಯುಟಿಕ್ಸ್) ಹುದ್ದೆ - ಹೈ.ಕ. ಹುದ್ದೆ 01 ಒಟ್ಟು 01 ಹುದ್ದೆ; ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಸಹಾಯಕ ನಿರ್ದೇಶಕರು / ಪತ್ರಾಂಕಿತ ವ್ಯವಸ್ಥಾಪಕರು / ವ್ಯವಸ್ಥಾಪಕರು ರವೀಂದ್ರ ಕಲಾಕ್ಷೇತ್ರ ಹುದ್ದಗಳು - ಹೈ.ಕ ಹುದ್ದೆ - 02 ಒಟ್ಟು 02 ಹುದ್ದೆಗಳು; ಜಲಸಂಪನ್ಮೂಲ ಇಲಾಖೆಯಲ್ಲಿನ ಸಹಾಯಕ ಅಬಿಯಂತರರು (ಸಿವಿಲ್) ಹುದ್ದೆಗಳು - ಹೈ.ಕ. ಹುದ್ದೆಗಳು 181 ಒಟ್ಟು 181 ಹುದ್ದೆಗಳು; ಜಲಸಂಪನ್ಮೂಲ ಇಲಾಖೆಯಲ್ಲಿನ ಸಹಾಯಕ ಅಬಿಯಂತರರು (ಮೆಕ್ಯಾನಿಕಲ್) ಹುದ್ದೆಗಳು - ಹೈ.ಕ ಹುದ್ದೆಗಳು 03 ಒಟ್ಟು 03 ಹುದ್ದೆಗಳು; ಪೌರಾಡಳಿತ ನಿರ್ದೇಶನಾಲಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪರಿಸರ ಅಭಿಯಂತರರು ಹುದ್ದೆಗಳು - 01 ಹೈ.ಕ 01+02 (ಬ್ಯಾ.ಲಾ) ಒಟ್ಟು 04 ಹುದ್ದೆಗಳು ಮತ್ತು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಸಹಾಯಕ ನಿರ್ದೇಶಕರ ಹುದ್ದೆಗಳು - 10+06 (ಬ್ಯಾಲಾ) ಹೈ.ಕ ಹುದ್ದೆಗಳು - 03+02(ಬ್ಯಾ.ಲಾ) ಒಟ್ಟು 21 ಹುದ್ದೆಗಳು.

ಅರ್ಹ ಅಭ್ಯರ್ಥಿಗಳು ದಿನಾಂಕ: 10-07-2020ರಿಂದ ಅನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು ಅಧಿಸೂಚನೆಗಳನ್ನು ಆಯೋಗದ ಅಂತರ್ಜಾಲ http://kpsc.kar.nic.in/notification ನಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕ ಸೇವಾ ಆಯೋಗದ ಉಪ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.